ಫೋನ್ ನಂ. 080-22243926
ಫ್ಯಾಕ್ಸ್ ನಂ. 080-22110134
ವೆಬ್‌ಸೈಟ್ : www.kptcl.com
ಇಮೇಲ್ ಐಡಿ: dgmtkptcl@rediffmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

ಕವಿಪ್ರನಿನಿ/ಬಿ19/345/85-86

ನಿಗಮ ಕಾರ್ಯಾಲಯ,
ಕಾವೇರಿ ಭವನ,
ಬೆಂಗಳೂರು-560009,
ದಿನಾಂಕ: 07.09.2021.

ಡಿಟಿ ಸಿಎ(ಸೆಕ್ಷನ್-1)
ಎ.ಎ.ಎಸ್. 08/9/21

## ಸುತ್ತೋಲೆ

ವಿಷಯ: ಶಾಲೆ ಮತ್ತು ಕಾಲೇಜುಗಳ ಮೇಲೆ ಹಾದುಹೋಗಿರುವ ವಿದ್ಯುತ್ ಪ್ರಸರಣ ಮಾರ್ಗಗಳನ್ನು ಸ್ಥಳಾಂತರಿಸುವ ಕುರಿತಂತೆ.

ಉಲ್ಲೇಖ:
1. ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಟಿಪ್ಪಣಿ ಸಂಖ್ಯೆ: ಇಕ&ಸಸ/ಟಿ/2021 ದಿನಾಂಕ: 19.08.2021.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು ರವರ ಪತ್ರ ಸಂಖ್ಯೆ: ಎನರ್ಜಿ 603 ವಿಎಸ್‌ಸಿ 2021 ದಿನಾಂಕ: 06.09.2021.

AEE
8/9/21

******

ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ಸಂದರ್ಭದಲ್ಲಿ ವಿದ್ಯುತ್ ತಂತಿ ತಗುಲಿ ವಿದ್ಯಾರ್ಥಿಯೊಬ್ಬರು ಮೃತಪಟ್ಟಿರುವುದು ಮಾಧ್ಯಮಗಳಲ್ಲಿ ವರದಿಯಾಗಿರುವ ಹಿನ್ನೆಲೆಯಲ್ಲಿ. ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳ ಮೇಲೆ ಹಾದು ಹೋಗಿರುವ ವಿದ್ಯುತ್ ಮಾರ್ಗಗಳನ್ನು ಸ್ಥಳಾಂತರಿಸಲು / ಎ.ಬಿ ಕೇಬಲ್ ಅಳವಡಿಸಲು ಕಾಮಗಾರಿಗಳನ್ನು ಕಾಲಮಿತಿಯೊಳಗೆ ಕೈಗೊಳ್ಳುವಂತೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಉಲ್ಲೇಖ-1ರ ಟಿಪ್ಪಣಿಯ ನಿರ್ದೇಶನದ ಮೇರೆಗೆ, ಶಾಲಾ ಕಾಲೇಜುಗಳ ಮೇಲೆ/ಆವರಣದಲ್ಲಿ ಹಾದು ಹೋಗಿರುವ ವಿದ್ಯುತ್ ಮಾರ್ಗಗಳನ್ನು ನಿಯಮಾನುಸಾರ ಸ್ಥಳಾಂತರಿಸಲು ಅಥವಾ ಎ.ಬಿ ಕೇಬಲ್ ಅಳವಡಿಸಲು ಕಾಲಮಿತಿಯನ್ನು ನಿಗದಿಪಡಿಸಿ ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಉಲ್ಲೇಖ ಪತ್ರ (2) ರಲ್ಲಿ ಸೂಚಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ತಮ್ಮ ಪ್ರಸರಣ ವಲಯದ ವ್ಯಾಪ್ತಿಗೊಳಪಡುವ ವಿದ್ಯುತ್ ಪ್ರಸರಣ ಮಾರ್ಗಗಳು ಶಾಲೆ ಮತ್ತು ಕಾಲೇಜುಗಳ ಮೇಲೆ/ಆವರಣದಲ್ಲಿ ಹಾದು ಹೋಗಿದ್ದಲ್ಲಿ, ಅಂತಹ ವಿದ್ಯುತ್ ಪ್ರಸರಣ ಮಾರ್ಗಗಳ ಸ್ಥಳ ಪರಿಶೀಲನೆ ನಡೆಸಿ, ಮಾರ್ಗಗಳನ್ನು ಪರ್ಯಾಯ ಜಾಗಕ್ಕೆ ಸ್ಥಳಾಂತರಿಸಲು ನಿಗಮದ ನಿಯಮಾನುಸಾರ ಅಗತ್ಯ ದಾಖಲೆಗಳೊಂದಿಗೆ ಸೂಕ್ತ ಪ್ರಸ್ತಾವನೆಯನ್ನು **2** ತಿಂಗಳೊಳಗಾಗಿ ನಿಗಮ ಕಛೇರಿಗೆ ಅನುಮೋದನೆಗಾಗಿ ಸಲ್ಲಿಸಲು ಸೂಚಿಸಿದೆ.

ಮುಂದುವರೆದು, ನಿಗಮದ ಅನುಮೋದನೆಯ ನಂತರ, ಶಾಲೆ ಮತ್ತು ಕಾಲೇಜುಗಳ ಮೇಲೆ/ಆವರಣದಲ್ಲಿ ಹಾದು ಹೋಗಿರುವ ವಿದ್ಯುತ್ ಪ್ರಸರಣ ಮಾರ್ಗಗಳನ್ನು ಸ್ಥಳಾಂತರಿಸಲು ಕಾಮಗಾರಿಗಳನ್ನು **6** ತಿಂಗಳೊಳಗಾಗಿ ನಿರ್ವಹಿಸಿ ಪೂರ್ಣಗೊಳಿಸಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

B.R 07/09/21

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
**ಕವಿಪ್ರನಿನಿ**

**ಪ್ರತಿಗಳನ್ನು ಮಾಹಿತಿಗಾಗಿ:**

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ವಿದ್ಯುತ್ ಸರಬರಾಜು ಕಂಪನಿ / ಪಿಸಿಕೆಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ವಿದ್ಯುತ್ ಸರಬರಾಜು ಕಂಪನಿ.
3. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆ ಮತ್ತು ಮಾ.ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.

**ಪ್ರತಿಗಳನ್ನು ಮಾಹಿತಿಗಾಗಿ ಹಾಗೂ ಸೂಕ್ತ ತುರ್ತು ಕ್ರಮಕ್ಕಾಗಿ:**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಪ್ರಸರಣ ವಲಯ, ಕವಿಪ್ರನಿನಿ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಪ್ರಸರಣ (ಕಾಮಗಾರಿ / ಕಾಮಗಾರಿ & ನಿರ್ವಹಣೆ / ನಿರ್ವಹಣೆ ) ವೃತ್ತ ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಬೃಹತ್ ಕಾಮಗಾರಿ / ಪ್ರ.ಮಾ & ಉ.ಕೇಂದ್ರ / ಸಿವಿಲ್, ಕವಿಪ್ರನಿನಿ.
4. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಬೃಹತ್ ಕಾಮಗಾರಿ / ನೋಡಲ್ ಕೇಂದ್ರ / ಟಿ.ಎಲ್.ಎಂ ಉಪ-ವಿಭಾಗ / ಸಿವಿಲ್, ಕವಿಪ್ರನಿನಿ.
5. ಎಲ್ಲಾ ಸಹಾಯಕ ಇಂಜಿನಿಯರ್ (ವಿ) / ಕಿರಿಯ ಇಂಜಿನಿಯರ್ (ವಿ), ಬೃಹತ್ ಕಾಮಗಾರಿ ವಿಭಾಗ / ಟಿ.ಎಲ್.ಎಂ ಉಪ-ವಿಭಾಗ, 220/110/66 ಕೆ.ವಿ ಉಪ-ಕೇಂದ್ರಗಳು, ಕವಿಪ್ರನಿನಿ.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**